ಬಳ್ಳಾರಿ ಜಿಲ್ಲೆಯಲ್ಲಿ ತಂಬಾಕು ಬಳಕೆ ಗಣನೀಯ ನಿಯಂತ್ರಣಕ್ಕಾಗಿ ಶಾಲಾ ಕಾಲೇಜುಗಳು ಸೇರಿದಂತೆ ಗ್ರಾಪಂ ಮಟ್ಟದಲ್ಲಿಯೂ ತಂಬಾಕಿನಿಂದಾಗುವ ದುಷ್ಪರಿಣಾಮ ಕುರಿತು ಹೆಚ್ಚು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಪರಿಣಾಮಕಾರಿಯಾಗಿ ತಂಬಾಕು ನಿಯಂತ್ರಣ ಜಾರಿಗೆ ತರಬಹುದು.

• **ಮಹಮ್ಮದ್ ಝುಬೇರ್** ಅಪರ ಜಿಲ್ಲಾಧಿಕಾರಿ

ಸುದ್ದಿ ಸಿಂಚನ

ನಾಳೆ ಹಂಪಸಾಗರದಲ್ಲಿ ರಂಭಾಪುರಿ ಶ್ರೀ ವರ್ಧಂತಿ

ಬಳ್ಳಾರಿ: ವಿಜಯನಗರ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಹಂಪಸಾಗರ ಗ್ರಾಮದಲ್ಲಿ ಫೆ.1ರಂದು ಬಾಳೆಹೊನ್ನೂರು ರಂಭಾಪುರಿ ವೀರಸಿಂಹಾಸನಾಧೀಶ್ವರ ಪ್ರಸನ್ನ ರೇಣುಕ ಡಾ.ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯರ 34ನೇ ವರ್ಷದ ಪೀಠಾರೋಹಣ ವರ್ಧಂತಿ ಮಹೋತ್ಸವ, ಅಡ್ಡಪಲ್ಲಕ್ಕಿ, ಜನಜಾಗೃತಿ ಧರ್ಮ ಸಮಾರಂಭ ಜರುಗಲಿದೆ.ರಂಭಾಪುರಿ ಶ್ರೀ ವೀರಸಿಂಹಸನಾ ಮಹಾಪೀಠವನ್ನು ಪೀಠಾರೋಹಣ ಮಾಡಿ 33 ವರ್ಷಗಳು ಪೂರ್ಣಗೊಂಡ ಹಿನ್ನೆಲೆಯಲ್ಲಿ ಪೀಠಾರೋಹಣ ವರ್ಧಂತಿ ಮಹೋತ್ಸವ ಏರ್ಪಡಿಸಲಾಗಿದೆ. ಅಪೂರ್ವ ಧರ್ಮ ಸಮಾರಂಭದಲ್ಲಿ ನಾಡಿನ ವಿವಿಧ ಮಠಗಳ ಮಠಾಧೀಶರು, ಹರಗುರು ಚರಮೂರ್ತಿಗಳು, ರಾಜಕೀಯ ಧುರೀಣರು, ವಿವಿಧ ಸಮಾಜದ ಗಣ್ಯರು, ಕವಿ, ಕಲಾವಿದರು ಭಾಗವಹಿಸಲಿದ್ದಾರೆ. ಸಮಾರಂಭ ಹಿನ್ನೆಲೆಯಲ್ಲಿ ಫೆ.1ರಂದು ಕೃಷಿ ಮೇಳ ಆಯೋಜಿಸಲಾಗಿದೆ. ಫೆ.3ರಂದು ಧರ್ಮ ಜಾಗೃತಿ ಕುರಿತು ವಿಶೇಷ ಉಪನ್ಯಾಸ ಸಹ ನಡೆಯಲಿದೆ. ಖ್ಯಾತ ವಾಗ್ಮಿ ಹಾರಿಕಾ ಮಂಜುನಾಥ ಭಾಗವಹಿಸಲಿದ್ದಾರೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ. ಮಹಾತಪಸ್ವಿ ಚತುರ್ಭಾಷಾ ವಿಶಾರದ ಲಿಂ.ವೀರರುದ್ರಮುನಿ ಜಗದ್ಗುರು ಅನುಗ್ರಹ ಶ್ರೀರಕ್ಷೆಗೆ ಪಾತ್ರರಾಗಿ ನಾಡಿನ ಶಿವಾಚಾರ್ಯ ಸಮ್ಮುಖದಲ್ಲಿ ಅಸಂಖ್ಯಾತ ಭಕ್ತರ ಸಂಗಮದಲ್ಲಿ 1992ರ ಫೆ.6ರಂದು ರಂಭಾಪುರಿ ವೀರಸಿಂಹಾಸನದ ವೀರಪೀಠದ ಒಡೆಯರಾಗಿ ಪೀಠಾರೋಹಣ ಮಾಡಿದ ರಂಭಾಪುರಿ ಶ್ರೀಗಳು 121ನೇ ಜಗದ್ಗುರುಗಳಾಗಿ ಆದಿ ರೇಣುಕಾಚಾರ್ಯರು ಅವತರಿಸಿದ ಮೂಲ ಸೋಮೇಶ್ವರ ಮಹಾಲಿಂಗದ ನಾಮಾಂಕಿತವನ್ನೇ ಹೊಂದಿ, ಸಾಹಿತ್ಯ, ಸಂಸ್ಕೃತಿ ಸರ್ವಾಧಿಸಲಿ ಶಾಂತಿ ಸಮೃದ್ಧಿ ಸರ್ವರಲ್ಲಾಗಲಿ ಎಂಬ ದಿವ್ಯ ಸಂದೇಶವನ್ನು ನಾಡಿಗೆ ನೀಡಿದ ಸತ್ಪುಷರಾಗಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಬಸ್‌ಗಳ ಮೇಲೆ ಅಂಟಿಸಿದ ಪಾನ್ ಮಸಾಲ ಜಾಹೀರಾತು ತೆರವು ಮಾಡಿ

ತಂಬಾಕು ನಿಯಂತ್ರಣ ಕೋಶ ಸಭೆಯಲ್ಲಿ ಎಡಿಸಿ ಝುಬೇರ್ ಸೂಚನೆ

• **ಕನ್ನಡಪ್ರಭ ವಾರ್ತೆ** ಬಳ್ಳಾರಿ

ಬಸ್‌ಗಳ ಮೇಲೆ ಅಂಟಿಸಲಾಗಿರುವ ತಂಬಾಕು ಉತ್ಪನ್ನಗಳಾದ ಪಾನ್ ಮಸಾಲ ಬಳಕೆಯ ಪ್ರಚೋದಕ ಜಾಹೀರಾತುಗಳನ್ನು ಕೂಡಲೇ ತೆರವುಗೊಳಿಸುವಂತೆ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಏರ್ಪಡಿಸಿದ್ದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಸ್‌ಗಳ ಮೇಲೆ ತಂಬಾಕು ಉತ್ಪನ್ನಗಳ ಬಳಕೆಯ ಪ್ರಚೋದಕ ಜಾಹೀರಾತುಗಳನ್ನು ಹಾಕಲಾಗಿದೆ. ಇದಕ್ಕೆ ಅನುಮತಿ ಯಾರು ನೀಡಿದರು? ಎಂದು ಸಾರಿಗೆ ಇಲಾಖೆಯ ಅಧಿಕಾರಿಗಳನ್ನು ಪ್ರಶ್ನಿಸಿದರು. ಖಾಸಗಿ ಬಸ್‌ಗಳಾಗಿದ್ದರೂ ಸರಿಯೇ ಅವರೊಂದಿಗೆ ಚರ್ಚಿಸಿ ಕೂಡಲೇ ತೆರವುಗೊಳಿಸಲು ಕ್ರಮ ವಹಿಸಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ತಂಬಾಕು ಬಳಕೆ ಗಣನೀಯ ನಿಯಂತ್ರಣಕ್ಕಾಗಿ ಶಾಲಾ ಕಾಲೇಜುಗಳು ಸೇರಿದಂತೆ ಗ್ರಾಪಂ ಮಟ್ಟದಲ್ಲಿಯೂ ತಂಬಾಕಿನಿಂದಾಗುವ ದುಷ್ಪರಿಣಾಮ ಕುರಿತು ಹೆಚ್ಚು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಪರಿಣಾಮಕಾರಿಯಾಗಿ ತಂಬಾಕು ನಿಯಂತ್ರಣ ಜಾರಿಗೆ ತರಬಹುದು. ಇತ್ತೀಚಿನ ದಿನಗಳಲ್ಲಿ ಯುವ ಸಮುದಾಯವು ಸಹ ತಂಬಾಕು ಉತ್ಪನ್ನಗಳನ್ನು ಉಪಯೋಗಿಸುತ್ತಿದ್ದಾರೆ. ಇದರಿಂದ ಅವರ ಭವಿಷ್ಯವು ಹಾಳಾಗುತ್ತಿದ್ದು, ಇದರ ಕುರಿತು ಜಿಲ್ಲಾ ಪಂಚಾಯತ್ ಹಾಗೂ ಇತರೆ ಇಲಾಖೆಗಳ ಸಹಕಾರದೊಂದಿಗೆ ಹಳ್ಳಿಗಳಲ್ಲಿಯೂ ಅರಿವು ಮೂಡಿಸುವ ಕಾರ್ಯವಾಗಬೇಕು ಎಂದು ಸೂಚಿಸಿದರು.

ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಮುಂಭಾಗದಲ್ಲಿ ಕೋಟ್ಪಾ-2003ರ ಸೆಕ್ಷನ್-4 ಮತ್ತು ಸೆಕ್ಷನ್-6ಬಿ ನಾಮಫಲಕಗಳನ್ನು ಕಡ್ಡಾಯವಾಗಿ ಅಳವಡಿಸಬೇಕು ಎಂದು ಡಿಡಿಪಿಐ ಮತ್ತು ಡಿಡಿಪಿಯು ಅಧಿಕಾರಿಗಳಿಗೆ ತಿಳಿಸಿದರು.

ಎಡಿಸಿ ಮಹಮ್ಮದ್ ಝುಬೇರ್ ಮಾತನಾಡಿದರು.

- ಇತ್ತೀಚಿನ ದಿನಗಳಲ್ಲಿ ಯುವ ಸಮುದಾಯವು ಸಹ ತಂಬಾಕು ಉತ್ಪನ್ನಗಳನ್ನು ಉಪಯೋಗಿಸುತ್ತಿದ್ದಾರೆ.
- ಇದರಿಂದ ಅವರ ಭವಿಷ್ಯವು ಹಾಳಾಗುತ್ತಿದ್ದು ಇದರ ಕುರಿತು ಜಿಪಂ, ಇತರೆ ಇಲಾಖೆಗಳ ಸಹಕಾರದೊಂದಿಗೆ ಹಳ್ಳಿಗಳಲ್ಲಿಯೂ ಅರಿವು ಮೂಡಿಸುವ ಕಾರ್ಯವಾಗಬೇಕು.

ಜಿಲ್ಲೆಯಲ್ಲಿ ಹಲವಾರು ರೀತಿಯ ಕೈಗಾರಿಕೆಗಳಿವೆ. ಈಗಾಗಲೇ ಸಾಕಷ್ಟು ವಿವಿಧ ರೀತಿಯಲ್ಲಿ ಮಾಲಿನ್ಯವಾಗುತ್ತಿದ್ದು, ತಂಬಾಕು ಬಳಕೆಯಿಂದ ಶ್ವಾಸಕೋಶ ಸಂಬಂಧಿತ ರೋಗಗಳು ಬರುತ್ತಿದ್ದು, ಕೈಗಾರಿಕೆ ವಲಯಗಳಲ್ಲಿಯೂ ಸಹ ತಂಬಾಕು ಕುರಿತಾಗಿ ಅರಿವು ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾ ಕೈಗಾರಿಕಾ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ. ಮಾತನಾಡಿ, ಬಳ್ಳಾರಿ ನಗರದ ಅಂದ್ರಾಳ್ ಬೈಪಾಸ್ ರಸ್ತೆಯ ವಿಕ್ಟೋರಿಯಾ ಬಾರ್‌ಮತ್ತು ರೆಸ್ಟೋರೆಂಟ್ ನಲ್ಲಿ ಧೂಮಪಾನ ಪ್ರದೇಶ ಸ್ಥಾಪಿಸಿದ್ದು, ಆದರೆ ಸರಿಯಾಗಿ ನಿರ್ವಹಣೆ ಮಾಡಿಲ್ಲ ಎಂದು ಸಭೆಗೆ ತಿಳಿಸಿದರು. ಈ ಕುರಿತು ಕೂಡಲೇ ನೋಟಿಸ್ ಜಾರಿ ಮಾಡಬೇಕು ಎಂದು ಅಬಕಾರಿ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿರುವ ಬಾರ್‌ಮತ್ತು ರೆಸ್ಟೋರೆಂಟ್‌ಗಳಲ್ಲಿ ಕೋಟ್ಪಾ ಕಾಯ್ದೆಯ ಅನುಸಾರ ನಾಮಫಲಕ ಅಳವಡಿಸುವುದರ ಜೊತೆಗೆ ಧೂಮಪಾನ ಪ್ರದೇಶಗಳನ್ನು ಸ್ಥಾಪಿಸಬೇಕು. ಈ ಕುರಿತು ಕಟ್ಟುನಿಟ್ಟಿನ ಸೂಚನೆ ನೀಡಿ ಎಂದು ಅಬಕಾರಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಪ್ರತಿ ತಿಂಗಳು ಆಯೋಜಿಸಲಾಗುತ್ತಿರುವ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ನಾಟಕ ಕಾರ್ಯಕ್ರಮವಾದ 'ತಿಂಗಳು ಸೊಬಗು' ಕಾರ್ಯಕ್ರಮದಲ್ಲಿ ತಂಬಾಕು ಉತ್ಪನ್ನಗಳಿಂದಾಗುವ ದುಷ್ಪರಿಣಾಮ ಕುರಿತು ಅರಿವು ಮೂಡಿಸಲು ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮನ್ವಯತೆ ಸಾಧಿಸಿ ಎಂದು ಅಪರ ಜಿಲ್ಲಾಧಿಕಾರಿ ಸಲಹೆ ನೀಡಿದರು.

ಈ ಬಾರಿಯ ಜಿಲ್ಲೆಯ ತಂಬಾಕು ಮುಕ್ತ ಗ್ರಾಮಗಳನ್ನಾಗಿ ಘೋಷಿಸಲು ಈ ಕುರಿತು ಕ್ರಮ ವಹಿಸಬೇಕು ಎಂದು ಜಿಪಂ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್. ಬಸರೆಡ್ಡಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ ವಿ., ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

ಜಮೀರ್ ಪುತ್ರನ ಸಿನಿಮಾ ತಂಡದಿಂದ ಹಂಪಿಯಲ್ಲಿ ಬೆಂಕಿ

ತುಂಗಭದ್ರಾ ತೀರದಲ್ಲಿ ಬೆಂಕಿ ಹಾಕಿ ಕಲ್ಟ್ ಚಿತ್ರದ ಶೂಟಿಂಗ್ ಮಾಡಲಾಯಿತು.

• **ಕನ್ನಡಪ್ರಭ ವಾರ್ತೆ** ಹೊಸಪೇಟೆ

ಜಿಲ್ಲಾ ಉಸ್ತುವಾರಿ ಮಂತ್ರಿ ಜಮೀರ್ ಅಹ್ಮದ್ ಖಾನ್ ಪುತ್ರ ಜೈದ್ ಖಾನ್ ನಟನೆಯ ಕಲ್ಟ್ ಚಿತ್ರದ ಶೂಟಿಂಗ್ ವೇಳೆ ಬುಧವಾರ ತುಂಗಭದ್ರಾ ನದಿ ತೀರದಲ್ಲಿ ಬೆಂಕಿ ಹಾಕಿ ಚಿತ್ರೀಕರಣ ಮಾಡಲಾಗಿದೆ.

ಹಂಪಿಯ ಸ್ನಾನಘಟ್ಟದ ಎದುರು ಬದಿಯ ವಿರುಪಾಪುರ ಗಡ್ಡಿ ಸಮೀಪದಲ್ಲಿ ನದಿ ತೀರದಲ್ಲಿ ಬೆಂಕಿ ಹಾಕಿ ಶೂಟಿಂಗ್ ನಡೆಸಲಾಗಿದೆ. ತುಂಗಭದ್ರಾ ನದಿ ತೀರದಲ್ಲಿ ಅಪರೂಪದ ನೀರುನಾಯಿಗಳು ಇರುತ್ತವೆ. ಹಾಗಾಗಿ ಇದನ್ನು ನೀರುನಾಯಿ ಸಂರಕ್ಷಿತ ಪ್ರದೇಶ ಎಂದು ಘೋಷಿಸಲಾಗಿದೆ. ಈಗ ಈ ಪ್ರದೇಶದಲ್ಲೇ ಚಿತ್ರ ತಂಡ ಬೆಂಕಿ ಹಾಕಿ ಶೂಟಿಂಗ್ ನಡೆಸಿದ್ದು, ಅರಣ್ಯ ಇಲಾಖೆ, ಹಂಪಿ ಅಭಿವೃದ್ಧಿ ಪ್ರಾಧಿಕಾರ, ಕೇಂದ್ರ ಹಾಗೂ ರಾಜ್ಯ ಪುರಾತತ್ವ ಇಲಾಖೆಗಳು ಸುಮ್ಮನಾಗಿರುವ ಬಗ್ಗೆ ಈಗ ವನ್ಯಜೀವಿ ಪ್ರೇಮಿಗಳು ಹಾಗೂ ಪರಿಸರ ಪ್ರೇಮಿಗಳು ಬೇಸರ ವ್ಯಕ್ತಪಡಿಸಿದ್ದಾರೆ.

ಚಿತ್ರ ತಂಡ ಬೆಂಕಿ ಹಾಕಿ ಶೂಟಿಂಗ್ ನಡೆಸಿದೆ. ಇದಕ್ಕೆ ಸಂಬಂಧಿಸಿದ ಇಲಾಖೆ ಆಕ್ಷೇಪ ವ್ಯಕ್ತಪಡಿಸದೇ ಇರುವುದು ಭಾರೀ ಚರ್ಚೆಗೆ ಗ್ರಾಸವಾಗಿದೆ. ಹಂಪಿಯಲ್ಲಿ ಬುಧವಾರ ಶೂಟಿಂಗ್‌ನಲ್ಲಿ ನಟಿ ರಚಿತಾರಾಮ್ ಭಾಗವಹಿಸಿದ್ದರು. ಆದರೆ ಸಚಿವರ ಪುತ್ರ, ನಟ ಜೈದ್ ಖಾನ್ ಶೂಟಿಂಗ್‌ಗೆ ಬಂದಿರಲಿಲ್ಲ.

ಫೈರ್ ಕ್ಯಾಂಪ್ ಆತಂಕ:

ಈ ಹಿಂದೆ ನದಿಪಾತ್ರದಲ್ಲಿ ಜೀವ ವೈವಿಧ್ಯ ಒಣಗುತ್ತಿದೆ ಎಂಬುದನ್ನು ಮನಗಂಡು ಆಂಧ್ರಪ್ರದೇಶ, ಕರ್ನಾಟಕ ಸರ್ಕಾರಗಳು ತುಂಗಭದ್ರಾ ಮಂಡಳಿಯಿಂದ ನೀರು ಬಿಡಿಸಿ, ಜೀವವೈವಿಧ್ಯ ಉಳಿಸುವ ಕಾರ್ಯ ಮಾಡಿತ್ತು. ಈಗ ನೋಡಿದರೆ ಬೆಂಕಿ ಹಾಕಿ ಶೂಟಿಂಗ್ ನಡೆಸಲಾಗಿದೆ. ಇದೇ ರೀತಿಯಾದರೆ ದೇಶ, ವಿದೇಶಿ ಪ್ರವಾಸಿಗರು ನದಿಪಾತ್ರದಲ್ಲಿ ಬೆಂಕಿ ಹಾಕುವ ಮೂಲಕ ಫೈರ್ ಕ್ಯಾಂಪ್ ಹಾಕುವ ಅಪಾಯವೂ ಇದೆ ಎಂದು ವನ್ಯಜೀವಿ ಪ್ರೇಮಿಗಳು ಆತಂಕ ವ್ಯಕ್ತಪಡಿಸಿದ್ದಾರೆ.

ಹಂಪಿಯ ನದಿಪಾತ್ರದಲ್ಲಿ ಬೆಂಕಿ ಹಾಕಿ ಕಲ್ಟ್ ಚಿತ್ರ ತಂಡ ಶೂಟಿಂಗ್ ಮಾಡಿರುವುದು ಸರಿಯಲ್ಲ. ಈ ಬಗ್ಗೆ ಸಂಬಂಧಿಸಿದ ಇಲಾಖೆ ನಿಗಾ ವಹಿಸಬೇಕು. ಅಪರೂಪದ ಜೀವಿಗಳು ಇರುವ ಪ್ರದೇಶದಲ್ಲಿ ಈ ರೀತಿ ನಡೆಯಬಾರದು ಎಂದು ವನ್ಯಜೀವಿ ಪ್ರೇಮಿ ಸಮದ್ ಕೊಟ್ಟೂರು ಕನ್ನಡಪ್ರಭ ಬಳಿ ಅಳಲು ವ್ಯಕ್ತಪಡಿಸಿದರು.

ಹುತಾತ್ಮರ ತ್ಯಾಗ, ಬಲಿದಾನದ ಸ್ಮರಣೆ ಅಗತ್ಯ

ಹುತಾತ್ಮರ ದಿನಾಚರಣೆಯಲ್ಲಿ ಪ್ರಾಂಶುಪಾಲ ಸೂರಮ್ಮನಹಳ್ಳಿ ಗೋವಿಂದಪ್ಪ

ಕೂಡ್ಲಿಗಿ ಪಟ್ಟಣದ ಗಾಂಧೀಜಿ ಚಿತಾಭಸ್ಮವಿರುವ ಹುತಾತ್ಮರ ಸ್ಮಾರಕದಲ್ಲಿ ಗುರುವಾರ ನಡೆದ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಕನ್ನಡಪ್ರಭ ಹುಬ್ಬಳ್ಳಿ ಆವೃತ್ತಿಯ ಸ್ಥಾನಿಕ ಸಂಪಾದಕ ಮಲ್ಲಿಕಾರ್ಜುನ ಸಿದ್ದಣ್ಣವರ್ ಹುತಾತ್ಮರಿಗೆ ಅಶ್ರುತರ್ಪಣ ಸಲ್ಲಿಸಿದರು.

• **ಕನ್ನಡಪ್ರಭ ವಾರ್ತೆ** ಕೂಡ್ಲಿಗಿ

ಮಹಾತ್ಮಗಾಂಧೀಜಿಸತ್ಯ, ಅಹಿಂಸೆಯಹೋರಾಟದ ಮೂಲಕ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟವರಲ್ಲಿ ಅಗ್ರಗಣ್ಯರು. ಹುತಾತ್ಮರ ಹೋರಾಟ, ತ್ಯಾಗ, ಬಲಿದಾನವನ್ನುಸ್ಮರಿಸಬೇಕು ಎಂದು ಮೊಳಕಾಲ್ಮೂರು ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಸೂರಮ್ಮನಹಳ್ಳಿ ಗೋವಿಂದಪ್ಪ ತಿಳಿಸಿದರು.

ಅವರು ಪಟ್ಟಣದ ಗಾಂಧೀಜಿ ಚಿತಾಭಸ್ಮವಿರುವ ಹುತಾತ್ಮರ ರಾಷ್ಟ್ರೀಯ ಸ್ಮಾರಕದಲ್ಲಿ ತಾಲೂಕು ಆಡಳಿತ ಮತ್ತು ಗಾಂಧಿ ಸ್ಮಾರಕ ಸಮಿತಿಯಿಂದ ಗುರುವಾರ ಆಯೋಜಿಸಿದ್ದ ಹುತಾತ್ಮರ ದಿನಾಚಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ನಾಥೂರಾಮ್ ಗೋಡ್ಸೆ ಅವರಿಂದ ಗಾಂಧೀಜಿ ಹತರಾದ ದಿನವನ್ನು ಹುತಾತ್ಮರ ದಿನ ಅಥವಾ ಸರ್ವೋದಯ ದಿನವಾಗಿ ಆಚರಿಸಲಾಗುತ್ತಿದೆ. ಸ್ವಾತಂತ್ರ್ಯ ಚಳವಳಿ ಹಾಗೂ ದೇಶದ ರಕ್ಷಣೆಗಾಗಿ ತ್ಯಾಗ, ಬಲಿದಾನದ ಮೂಲಕ ಹುತಾತ್ಮರಾದವರನ್ನು ಸ್ಮರಿಸುವ ದಿನ. ಈಗಿನ ಯುವ ಪೀಳಿಗೆಯು ಗಾಂಧೀಜಿ ಸೇರಿ ರಾಷ್ಟ್ರಕ್ಕಾಗಿ ಹುತಾತ್ಮರಾದವರ ಆದರ್ಶಗಳನ್ನು ಪಾಲಿಸಬೇಕಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕನ್ನಡಪ್ರಭ ಹುಬ್ಬಳ್ಳಿ ಆವೃತ್ತಿಯ ಸ್ಥಾನಿಕ ಸಂಪಾದಕ ಮಲ್ಲಿಕಾರ್ಜುನ ಸಿದ್ದಣ್ಣವರ್, ತಾಪಂ ಇಒ ಕೆ.ನರಸಪ್ಪ, ಗಾಂಧಿ ಸ್ಮಾರಕ ಸಮಿತಿ ಅಧ್ಯಕ್ಷ ಡಿ.ನಾಗರಾಜಪ್ಪ ತಹಸೀಲ್ದಾರ್‌ಎಂ. ರೇಣುಕಾ, ಗ್ರೇಡ್ 2 ತಹಸೀಲ್ದಾರ್‌ವಿ.ಕೆ. ನೇತ್ರಾವತಿ, ಪಪಂ ಅಧ್ಯಕ್ಷ ಕಾವಲ್ಲಿ ಶಿವಪ್ಪನಾಯಕ, ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಶ್ರೀಕಂಠಾಪುರ ವೆಂಕಟೇಶ್, ಪಪಂ ಮುಖ್ಯಾಧಿಕಾರಿ ಎಂ.ಕೆ. ಮುಗಳಿ, ಎಸ್.ಟಿ. ಇಲಾಖೆಯ ಅಧಿಕಾರಿ ಮೆಹಬೂಬ್ ಬಾಷಾ, ಗಾಂಧಿಸ್ಮಾರಕ ಸಮಿತಿಯ ರಾಘವೇಂದ್ರ, ವಾಲಿಬಾಲ್ ವೆಂಕಟೇಶ್, ಬಿಇಒ ಪದ್ಮನಾಭ ಕರಣಂ, ಭಾರತ ಸೇವಾದಳದ ಬ್ಯಾಳಿ ವಿಜಯಕುಮಾರ್ ಗೌಡ, ಶಿಕ್ಷಕ ಎಚ್.ಹನುಮಂತಪ್ಪ, ತಾಪಂ ನಿವೃತ್ತ ಇಒ ಜಿ.ಎಂ. ಬಸಣ್ಣ, ಸರ್ಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷ ಪಾಲ್ತೂರು ಶಿವರಾಜ, ನಿವೃತ್ತ ನೌಕರರ ಸಂಘದ ಅಧ್ಯಕ್ಷ ತಳವಾರ ಶರಣಪ್ಪ, ಪತಂಜಲಿ ಯೋಗ ಸಮಿತಿ ಸಂಚಾಲಕಿ ಬ್ಯಾಳಿ ಗೌರಮ್ಮ, ವಿರೂಪಾಕ್ಷಪ್ಪ, ಉಪನ್ಯಾಸಕ ಕೊಟ್ರಪ್ಪನವರ ನಾಗರಾಜ್, ಸಂದೀಪ್ ರಾಯಸಂ, ಐಲಿ ರವಿಕುಮಾರ್, ಶಿಕ್ಷಕಿಯರಾದ ಚೌಡಮ್ಮ, ನಾಗರತ್ನ, ರಿಯಾಜ್ ಪಾಷಾ, ಪರ್ತಕರ್ತರಾದ ಕೃಷ್ಣ ಲಮಾಣಿ, ಭೀಮಣ್ಣ ಗಜಾಪುರ, ಹುಡೇಂ ಕೃಷ್ಣಮೂರ್ತಿ, ಬಿ.ನಾಗರಾಜ, ತಾಲೂಕು ಕಸಾಪ ಅಧ್ಯಕ್ಷ ಅಂಗಡಿ ವೀರೇಶ ಮತ್ತಿತರರು ಹುತಾತ್ಮರ ಸ್ಮಾರಕಕ್ಕೆ ಅಶ್ರುತರ್ಪಣ ಸಲ್ಲಿಸಿದರು.

ಕೂಡ್ಲಿಗಿಯಲ್ಲಿ ವಿಶೇಷ

ದೇಶದಲ್ಲೇ ದೆಹಲಿಯ ರಾಜ್‌ಘಾಟ್ ಬಿಟ್ಟರೆ ಗಾಂಧೀಜಿ ಚಿತಾಭಸ್ಮ ಕೂಡ್ಲಿಗಿಯಲ್ಲಿ ಇರುವುದು ವಿಶೇಷ. ಸಂಗೀತ ಶಿಕ್ಷಕಿ ರೋಜಾರಾಣಿ ಹಾಗೂ ವಿದ್ಯಾರ್ಥಿಗಳು 'ರಘುಪತಿ ರಾಘವ ರಾಜಾ ರಾಮ್' ಗೀತೆ ಹಾಡಿದರು. ನಂತರ 2 ನಿಮಿಷ ಕಾಲ ಮೌನಾಚರಣೆ ಸಂದರ್ಭದಲ್ಲಿ ರಾಷ್ಟ್ರಧ್ವಜವನ್ನು ಅರ್ಧಕ್ಕೆ ಇಳಿಸಲಾಯಿತು. ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಅಕ್ಕ ಶಶಿಕಲಾ ಭಗವದ್ಗೀತೆಯ ಅಧ್ಯಾಯ ಓದಿದರು. ಅಬೀದ್ ಅಲಿ ಅವರಿಂದ ಕುರಾನ್ ಪಠಿಸಿದರು. ಸಂತ ಮೈಕಲ್ ಚರ್ಚ್ ಫಾ. ವಿಜಯರಾಜ್ ಅವರಿಂದ ಬೈಬಲ್ ಪಠಣ, ಜೈನ- ಬೌದ್ಧ ಧರ್ಮದ ಪ್ರಾರ್ಥನೆಯನ್ನು ಪ್ರಕಾಶ್ ನೆರವೇರಿಸಿದರು.

ಪೂರ್ಣಿಮಾಗೆ ಡಾಕ್ಟರೇಟ್

ಬಳ್ಳಾರಿ: ಇಲ್ಲಿನ ಪಟೇಲ್ ನಗರದ ನಂದಿ ಇನ್ ಸ್ಟಿಟ್ಯೂಟ್ ಆಫ್ ಮ್ಯಾನೇಜ್ ಮೆಂಟ್ ಆ್ಯಂಡ್ ಸೈನ್ಸ್ ಕಾಲೇಜಿನಲ್ಲಿ ಕನ್ನಡ ಉಪನ್ಯಾಸಕ ರಾಗಿ ಕಾರ್ಯ ನಿರ್ವಹಿಸುತ್ತಿರುವ ಪೂರ್ಣಿಮಾ ಬಿ.ಎಸ್.ಗೆ ಹಂಪಿಯ ಕನ್ನಡ ವಿವಿ ಪಿಎಚ್.ಡಿ ಪದವಿ ಘೋಷಿಸಿದೆ. ಕೊಪ್ಪಳದ ಗವಿಸಿದ್ದೇಶ್ವರ ಕಾಲೇಜಿನ ಕನ್ನಡ ಸಹ ಪ್ರಾಧ್ಯಾಪಕ ಡಾ. ಬಸವರಾಜ ಪೂಜಾರ್ ಮಾರ್ಗ ದರ್ಶನದಲ್ಲಿ ಕರ್ನಾಟಕಾಂಧ್ರ ಗಡಿ ಪ್ರದೇಶದ ವೃತ್ತಿ ರಂಗಭೂಮಿ ಕಲಾವಿದೆಯರು ಎಂಬ ಶೀರ್ಷಿಕೆಯಡಿ ಸಂಶೋಧನೆ ನಡೆಸಿದ್ದರು.

ನೈಋತ್ಯ ರೈಲ್ವೆ

ಟೆಂಡರ್ ಪ್ರಕಟಣೆ ಸಂ. ಎಸ್‌ಬಿಸಿ–ಜಿಎಸ್‌ಯು–ಇಎನ್‌ಜಿಜಿ–2025–ಎಬಿಎಸ್‌ಎಸ್–01

ಭಾರತದ ರಾಷ್ಟ್ರಪತಿಗಳ ಪರವಾಗಿ ಕೆಳಸಹಿದಾರರು ಕೆಳಕಂಡ ಕೆಲಸಕ್ಕಾಗಿ ಇ–ಟೆಂಡರ್‌ಗಳನ್ನು ಆಹ್ವಾನಿಸಿದ್ದಾರೆ.

ಕಾಮಗಾರಿಯ ಹೆಸರು	ಅಂದಾಜು ಮೌಲ್ಯ
ಅಮೃತ ಭಾರತ ನಿಲ್ದಾಣ ಯೋಜನೆಯ ಅಡಿಯಲ್ಲಿ ಗುಬ್ಬಿ ರೈಲ್ವೆ ನಿಲ್ದಾಣದ ಆಧುನೀಕರಣ.	ರೂ. 11,37,31,078.38

ಬಿಡ್‌ಗಳನ್ನು ಸಲ್ಲಿಸಲು ಕೊನೆಯ ದಿನಾಂಕ : 15–02–2025 ರಂದು 11:00 ಗಂಟೆಯವರೆಗೆ

ಹೆಚ್ಚಿನ ಮಾಹಿತಿಗಾಗಿ www.ireps.gov.in ಗೆ ಲಾಗ್ ಆನ್ ಆಗಿ

ಮುಖ್ಯ ಯೋಜನಾ ವ್ಯವಸ್ಥಾಪಕರು, ಗತಿ ಶಕ್ತಿ ಬೆಂಗಳೂರು

ಪಿಯುಬಿ/747/ಎಎಎಸ್/ಪಿಆರ್‌ಬಿ/ಎಸ್‌ಡಬ್ಲ್ಯುಆರ್/2024-25

South Western Railway - SWR | SWRRLY | SWRRLY

ನೈಋತ್ಯ ರೈಲ್ವೆ

ಟೆಂಡರು ಸೂಚನೆ ಸಂ.: 17-CWM-UBLS-2024-25
ದಿನಾಂಕ: 20.01.2025

ಈ ಕೆಳ ಸಹಿದಾರರು, ಭಾರತದ ರಾಷ್ಟ್ರಪತಿಗಳ ಪರವಾಗಿ ಕೆಳಗಡೆ ನೀಡಿರುವ ಕಾಮಗಾರಿಗಳಿಗೆ ಇ–ಟೆಂಡರ್‌ಗಳನ್ನು ಆಹ್ವಾನಿಸಿದ್ದಾರೆ:

ಕಾಮಗಾರಿಯ ವಿವರ	ಅಂದಾಜು ಮೌಲ್ಯ
ಡಿಇಟಿಸಿ 8 ವ್ಹೀಲರ್ ಟಿಡಬ್ಲ್ಯೂ–18004 ಮತ್ತು ಡಿಹೆಚ್‌ಟಿಸಿ 8 ವ್ಹೀಲರ್ ಟಿಡಬ್ಲ್ಯೂ–ಆರ್‌ಯು 819 ಗಾಗಿ ಟ್ರಾನ್ಸ್‌ಮಿಶನ್ ಸಿಸ್ಟಮ್, ಗಾಲಿ ಮತ್ತು ಅಚ್ಚು ಡ್ರೈವ್ ಗಿಯರ್ ಬಾಕ್ಸ್ ಅಸೆಂಬ್ಲಿ, ನ್ಯುಮಾಟಿಕ್ ಸಿಸ್ಟಮ್, ಡಿಜಿ ಸೆಟ್ ಮತ್ತು ಹೈಡ್ರಾಲಿಕ್ ಲಿಫ್ಟಿಂಗ್ ಪ್ಲಾಟ್‌ಫಾರ್ಮ್‌ಗಳ ಓವರ್‌ಹಾಲಿಂಗ್ ಮತ್ತು ಇತರ ಕಾಮಗಾರಿಗಳಿಗಾಗಿ ಐಆರ್‌ಇಪಿಎಸ್ ಮೂಲಕ ಓಪನ್ ಇ–ಟೆಂಡರ್ ಅನ್ನು ಆಹ್ವಾನಿಸಲಾಗಿದೆ.	ರೂ. 1,21,47,918.62 (ಜಿಎಸ್‌ಟಿ ಸೇರಿದಂತೆ)

ಬಿಡ್‌ಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 13.02.2025, 17:30 ಗಂಟೆಯವರೆಗೆ

ಹೆಚ್ಚಿನ ಮಾಹಿತಿಗಾಗಿ www.ireps.gov.in ಗೆ ಲಾಗ್ ಆನ್ ಆಗಿ

ಉಪ ಮುಖ್ಯ ಕಾರ್ಯಾಗಾರ ವ್ಯವಸ್ಥಾಪಕರು/ ಹುಬ್ಬಳ್ಳಿ ಕಾರ್ಯಾಗಾರ

PUB/740/AAMO/PRB/SWR/2024-25

South Western Railway - SWR | SWRRLY | SWRRLY

ಶಿವಮೊಗ್ಗ ಮಹಾನಗರ ಪಾಲಿಕೆ, ಶಿವಮೊಗ್ಗ

ಸಂಖ್ಯೆ: ಶಿಮನಪಾ/ಆ.ವಿ/ಸಿಆರ್/23/2024–25 ದಿನಾಂಕ: 29.01.2025

ಟೆಂಡರ್ ಪ್ರಕಟಣೆ

ಶಿವಮೊಗ್ಗ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಒಣ ತ್ಯಾಜ್ಯ ನಿರ್ವಹಣೆಗಾಗಿ ಮೆಟಿರಿಯಲ್ ರಿಕವರಿ ಫೆಸಿಲಿಟಿ (50 TPD& 22 TPD) ಮಿತಿಯಲ್ಲಿನ ಘಟಕಗಳಿಗೆ ಯಂತ್ರೋಪಕರಣಗಳನ್ನು ಅಳವಡಿಸಲು ಮಾನ್ಯ ಆಯುಕ್ತರು ಮಹಾನಗರ ಪಾಲಿಕ ಶಿವಮೊಗ್ಗ ಇವರಿಂದ ಅರ್ಹ ಗುತ್ತಿಗೆದಾರರಿಂದ ಅಲ್ಪಾವಧಿ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಅರ್ಹ ಗುತ್ತಿಗೆದಾರರು ಕರ್ನಾಟಕ ಪಬ್ಲಿಕ್ ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ (https://kppp.karnataka.gov.in) ಟೆಂಡರ್ ಸಲ್ಲಿಸುವುದು.

ಕ್ರ ಸಂ	ಕಾಮಗಾರಿ ಹೆಸರು	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)	ಇಎಂಡಿ ಮೊತ್ತ ರೂ.	ಲೆಕ್ಕ ಶೀರ್ಷಿಕೆ
1.	Supply, Installation and commissioning of Material recovery facility Machineries for 50 TPD (Phase 1 & Phase 2) & 22 TPD (Phase 1 & Phase 2) in Shivamogga city corporation limits. (Indent No - DMA/2024-25/IND3082/CALL-2)	430.00	6,45,000	ಸ್ವಚ್ಛ ಭಾರತ್ ಮಿಷನ್ (2.0)ನಿಧಿ

1) ಟೆಂಡರ್ ದಸ್ತಾವೇಜುಗಳನ್ನು ಡೌನ್‌ಲೋಡ್ ಮಾಡಿಕೊಳ್ಳುವ ಪ್ರಾರಂಭಿಕ ದಿನಾಂಕ: 30.01.2025, 2) ಪೂರ್ವಭಾವಿ ಸಭೆ (PRE-BID MEETING) : 10.02.2025 ರ ಪೂರ್ವಾಹ್ನ 11:00 ಗಂಟೆಗೆ ಮಹಾನಗರಪಾಲಿಕೆ ಶಿವಮೊಗ್ಗ. 3) ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ : 28.02.2025 ಸಂಜೆ 04.30 ಗಂಟೆಗೆ.

ಟೆಂಡರ್ ಷರತ್ತುಗಳು ಮತ್ತು ಹೆಚ್ಚಿನ ಮಾಹಿತಿಗಳನ್ನು ಈ ಕಛೇರಿಯ ಆರೋಗ್ಯ ವಿಭಾಗದಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ) ಇವರ ಕಛೇರಿಯಿಂದ ಕೆಲಸದ ವೇಳೆಯಲ್ಲಿ ಪಡೆಯಬಹುದಾಗಿದೆ. ಟೆಂಡರ್‌ನ ವೇಳಾಪಟ್ಟಿ ಮತ್ತು ಷರತ್ತುಗಳ ಬದಲಾವಣೆ ಇದ್ದಲ್ಲಿ ಕೆಪಿಪಿ–ಪ್ರೊಕ್ಯೂರ್‌ಮೆಂಟ್‌ನಲ್ಲಿ ಮಾತ್ರ ಅಧಿಸೂಚಿಸಲಾಗುವುದು, ಪತ್ರಿಕಾ ಪ್ರಕಟಣೆ ಹೊರಡಿಸಲಾಗುವುದಿಲ್ಲ.

ವಾ.ಸಾ.ಸಂ.ಇ./ಶಿ/ನಂ.186.01/ ಝೇಂಕಾರ್/2024–25

ಸಹಿ/– ಕಾರ್ಯಪಾಲಕ ಅಭಿಯಂತರರು ಮಹಾನಗರ ಪಾಲಿಕೆ, ಶಿವಮೊಗ್ಗ

ಕರ್ನಾಟಕ ಸರ್ಕಾರ
ಕಾರ್ಯನಿರ್ವಾಹಕ ಅಭಿಯಂತರವರ ಕಛೇರಿ
ಪಂಚಾಯತ ರಾಜ್ ಇಂಜಿನೀಯರಿಂಗ್ ವಿಭಾಗ, ಯಾದಗಿರ.

ಸಂಖ್ಯೆ:ಕಾಪಾಅ/ಪಂರಾಇಂ/ವಿಯಾ/4202/ಟೆ.ಪ್ರ/ತಾಸ–1/2024–25/1868 ದಿನಾಂಕ: 29.01.2025

ಸಂಕ್ಷಿಪ್ತ ಟೆಂಡರ ಪ್ರಕಟಣೆ (2ನೇ ಕರೆ)

(ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಮಾತ್ರ) (ದ್ವಿ ಲಕೋಟೆ)

1) ಕಾಮಗಾರಿಗಳ ವಿವರ.: ವಡಗೇರಾ ತಾಲೂಕಿನ ಸರಿಕಾರಿ ಹಿರಿಯ ಪ್ರಾಥಮಿಕ ಶಾಲಾ ಕಟ್ಟಡಕ್ಕೆ ಎರಡು ತರಬೇತಿ ಕೋಣೆ ಮತ್ತು ಒಂದು ತರಬೇತಿ ಕೋಣೆ ನಿರ್ಮಾಣ ಹಾಗೂ ಸರಕಾರಿ ಪ್ರೌಢ ಶಾಲಾ ಕಟ್ಟಡದ ದುರಸ್ತಿ ಕಾಮಗಾರಿ **2) ಲೆಕ್ಕ ಶೀರ್ಷಿಕೆ:** 2023–24ನೇ ಸಾಲಿನ ಲೆಕ್ಕ ಶೀರ್ಷಿಕೆ 4202–01–201–1–08 ಮಹತ್ವಾಕಾಂಕ್ಷಿ ಯೋಜನೆ. **3) ಟೆಂಡರಿಗಿಟ್ಟ ಅಂದಾಜು ಮೊತ್ತ:** ಕನಿಷ್ಠ ಮತ್ತು ಗರಿಷ್ಠ ರೂ. 69.13 ಲಕ್ಷ **4) ಗುತ್ತಿಗೆದಾರರ ದರ್ಜೆ:** 3ನೇ ದರ್ಜೆ ಮೇಲ್ಪಟ್ಟು **5) ಟೆಂಡರ ಫಾರಂ ಪಡೆಯಲು ಕೊನೆಯ ದಿನಾಂಕ:** 01.02.2025 ರಿಂದ 10.02.2025 ಸಾಯಂಕಾಲ 4:00 ಗಂಟೆವರೆಗೆ **6) ಟೆಂಡರ ಅರ್ಜಿ ಬೆಲೆ ಮತ್ತು ಇ.ಎಂ.ಡಿ. ಮೊತ್ತ:** ಇ ಪ್ರೊಕ್ಯೂರ್‌ಮೆಂಟ್‌ನಲ್ಲಿ ನಮೂದಿಸಿದಂತೆ (ಅರ್ಜಿ ಶುಲ್ಕು ಹಿಂದಿರುಗಿಸಲಾಗುವುದಿಲ್ಲಾ) **7) ಟೆಂಡರ ಫಾರಂ ಸಲ್ಲಿಸುವ ಅಂತಿಮ ದಿನಾಂಕ:** 10.02.2025 ಸಾಯಂಕಾಲ 4:00 ಗಂಟೆವರೆಗೆ **8) ಟೆಂಡರ ತೆರೆಯುವ ದಿನಾಂಕ ತಾಂತ್ರೀಕ:** 12.02.2025 ಬೆಳ್ಳಿಗೆ 11:00 ನಂತರ **9) ಟೆಂಡರ ತೆರೆಯುವ ದಿನಾಂಕ ಆರ್ಥಿಕ:** 15.02.2025 ಬೆಳ್ಳಿಗೆ 11:00 ನಂತರ **10) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ (ಕಛೇರಿ ಅವಧಿಯಲ್ಲಿ):** ಕಾರ್ಯನಿರ್ವಾಹಕ ಅಭಿಯಂತರವರ ಕಛೇರಿ ಪಂಚಾಯತ ರಾಜ್ ಇಂಜಿನೀಯರಿಂಗ್ ವಿಭಾಗ, ಯಾದಗಿರ. **11) ಅಂತರಜಾಲ ತಾಣದ ವಿಳಾಸ:** https://kppp.karnataka.gov.in

ಸೂಚನೆ :– ಟೆಂಡರರಿಗೆ ಸಂಬಂದಿಸಿದ ಮಾಹಿತಿಗಳನ್ನು ಈ ಕಛೇರಿಯಿಂದ ಕಛೇರಿ ಅವಧಿಯಲ್ಲಿ ಅಥವಾ https://kppp.karnataka.gov.in/ ವೆಬ್‌ಸೈಟ್‌ನಲ್ಲಿ ಪಡೆಯಬಹುದು (ರಜಾದಿನಗಳು ಹೊರತುಪಡಿಸಿ).

ವಾ.ಸಾ.ಸಂ.ಇ/ಯಾದಗಿರಿ/443/ಕೆ.ಎಸ್.ಎಂ.ಸಿ.ಎ/2024–25

ಸಹಿ/–ಕಾರ್ಯಪಾಲಕ ಇಂಜೀನಿಯರರು, ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ, ಯಾದಗಿರ.

ಹೊಸಪೇಟೆಯಲ್ಲಿ ನಕಲಿ ಪತ್ರಕರ್ತರ ಹಾವಳಿಗೆ ಕಡಿವಾಣ ಹಾಕಬೇಕು ಎಂದು ಕಾರ್ಯನಿರತ ಪತ್ರಕರ್ತರ ಸಂಘದಿಂದ ಗುರುವಾರ ಜಿಲ್ಲಾಧಿಕಾರಿ ಎಂ.ಎಸ್. ದಿವಾಕರಗೆ ಮನವಿ ಸಲ್ಲಿಸಲಾಯಿತು. ಎಸ್ಪಿ ಬಿ.ಎಲ್. ಶ್ರೀಹರಿಬಾಬು ಇದ್ದರು.

ಮನವಿ | ಜಿಲ್ಲಾಡಳಿತ, ಪೊಲೀಸ್ ಇಲಾಖೆ ವೈಫಲ್ಯ: ಆರೋಪ

ನಕಲಿ ಪತ್ರಕರ್ತರಿಗೆ ಕಡಿವಾಣ ಹಾಕಿ

• **ಕನ್ನಡಪ್ರಭ ವಾರ್ತೆ** ಹೊಸಪೇಟೆ

ಜಿಲ್ಲೆಯಲ್ಲಿ ನಕಲಿ ಪತ್ರಕರ್ತರ ಹಾವಳಿ ಮಿತಿ ಮೀರಿರುವುದರಿಂದ ಕಾರ್ಯನಿರತ ಪತ್ರಕರ್ತರು ಮುಕ್ತವಾಗಿ ಕಾರ್ಯ ನಿರ್ವಹಿಸುವುದು ಕಷ್ಟಸಾಧ್ಯ. ಈ ಬಗ್ಗೆ ಹಲವು ಬಾರಿ ದೂರು ನೀಡಿದರೂ ಯಾವುದೇ ಕ್ರಮ ಕೈಗೊಳ್ಳದಿರುವುದು ಜಿಲ್ಲಾಡಳಿತ, ಪೊಲೀಸ್ ಇಲಾಖೆ ವೈಫಲ್ಯ ಎತ್ತಿ ತೋರಿಸುತ್ತದೆ ಎಂದು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ತೀವ್ರ ಅಸಮಾಧಾನ ವ್ಯಕ್ತಪಡಿಸಿತು.

ಈ ಕುರಿತು ಸಂಘದ ಸದಸ್ಯರು ಗುರುವಾರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿ, ಸರ್ಕಾರಿ, ಸಂಘ, ಸಂಸ್ಥೆಗಳ ಕಾರ್ಯಕ್ರಮದಲ್ಲೂ ನಕಲಿ ಪತ್ರಕರ್ತರು ಮುಂಚೂಣಿಯಲ್ಲಿದ್ದು, ಮುದ್ರಣ, ದೃಶ್ಯ ಮಾಧ್ಯಮದ ವರದಿಗಾರರ ಕೆಲಸ-ಕಾರ್ಯಗಳಿಗೆ ಅಡ್ಡಿಯಾಗುತ್ತಿದ್ದಾರೆ. ನಕಲಿ ಪತ್ರಕರ್ತರನ್ನು ಪ್ರಶ್ನಿಸುವ ನೈಜ ಪತ್ರಕರ್ತರ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ವ್ಯವಸ್ಥಿತವಾಗಿ ಅಪಪ್ರಚಾರ ಮಾಡುವಂತಹ ಹುನ್ನಾರ ನಡೆದಿದೆ. ಇದನ್ನು ಖಂಡಿಸುವ ಪತ್ರಕರ್ತರನ್ನು ಗುರಿಯಾಗಿಸಿಕೊಂಡು ತೇಜೋವಧೆ ಮಾಡಲಾಗುತ್ತಿದೆ ಎಂದರು.

ಜ.27ರಂದು ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಕೆಡಿಪಿ ಸಭೆಯಲ್ಲಿ ಅಧಿಕೃತ ಪತ್ರಕರ್ತರು ಮಾತ್ರ ಸಭೆಯಲ್ಲಿರುವಂತೆ ಸಚಿವರು ಸೂಚಿಸಿದಾಗಲೂ ಕೆಲ ನಕಲಿ ಪತ್ರಕರ್ತರು ಸಭೆಯುದ್ದಕ್ಕೂ ನಿರಂತರವಾಗಿ ವಿಡಿಯೋ ಮಾಡುತ್ತಾ, ತಿರುಗಾಡುತ್ತಿದ್ದರೂ, ಅಧಿಕಾರಿಗಳು ಚಕಾರವೆತ್ತಿಲ್ಲ. ಜಿಲ್ಲಾಡಳಿತದ ಇತ್ತೀಚಿನ ನಡೆ ಪರೋಕ್ಷವಾಗಿ ನಕಲಿ ಪತ್ರಕರ್ತರಿಗೆ ಪ್ರೋತ್ಸಾಹಿಸುವಂತಿವೆ. ಇದು ನಕಲಿ ಪತ್ರಕರ್ತರ ಹಾವಳಿ ಹೆಚ್ಚಳಕ್ಕೆ ಕಾರಣವಾಗಿದೆ ಎಂದರು.

ಈ ವಿಚಾರದಲ್ಲಿ ಮೀನಮೇಷ ಎಣಿಸಿದರೆ ಮುಂದೆ ನಡೆಯಲಿರುವ ಸರ್ಕಾರಿ ಸಭೆ, ಸಮಾರಂಭ ಸೇರಿ ಹಂಪಿ ಉತ್ಸವದಲ್ಲಿ ನೈಜ ಪತ್ರಕರ್ತರು ಕಪ್ಪುಪಟ್ಟಿ ಧರಿಸಿ ಕರ್ತವ್ಯ ನಿರ್ವಹಿಸುತ್ತೇವೆ. ಸಿಎಂ ಸಿದ್ದರಾಮಯ್ಯ ಎದುರು ಪ್ರತಿಭಟನೆ ನಡೆಸುವುದಾಗಿ ಎಚ್ಚರಿಕೆ ನೀಡಿದರು.

ಜಿಲ್ಲಾಧಿಕಾರಿ ಎಂ.ಎಸ್. ದಿವಾಕರಗೆ ಮನವಿ ಸಲ್ಲಿಸಲಾಯಿತು. ಸಂಘದ ಜಿಲ್ಲಾಧ್ಯಕ್ಷ ಪಿ.ಸತ್ಯನಾರಾಯಣ, ಪ್ರ. ಕಾರ್ಯದರ್ಶಿ ಕೆ.ಲಕ್ಷ್ಮಣ, ರಾಜ್ಯ ಸಮಿತಿ ಸದಸ್ಯ ಪಿ. ವೆಂಕೋಬ ನಾಯಕ, ಪತ್ರಕರ್ತರಾದ ಮನೋಹರ್, ರೇಖಾ ಪ್ರಕಾಶ್, ಎಚ್.ವೆಂಕಟೇಶ್, ಸಾಕ್ಷಿ ಶ್ರೀನಿವಾಸ್, ಸುರೇಶ ಚವ್ಹಾಣ್, ಅನಂತ ಜೋಶಿ, ವೀರೇಂದ್ರ ನಾಗಲದಿನ್ನಿ, ಕೆ.ಬಿ. ಖವಾಸ್, ಎಂ.ಜಿ. ಬಾಲಕೃಷ್ಣ ಭಟ್, ಮಂಜುನಾಥ ಅಯ್ಯಸ್ವಾಮಿ, ಜಯಪ್ಪ ರಾಥೋಡ್, ಭೀಮಾ ನಾಯ್ಕ, ಭೀಮೇಶ, ಸಂಜೀವ, ಶಿವಾನಂದ, ಮಂಜುನಾಥ ಹಿರೇಮಠ, ವಿಜಯಕುಮಾರ್, ವೀರೇಶ್ ಎಂ.ಬಿ. ಪಾಂಡುರಂಗ ಜಂತ್ಲಿ, ಮೃತ್ಯುಂಜಯ, ವೀರಭದ್ರಪ್ಪ, ಅನೂಪಕುಮಾರ್ ಮತ್ತಿತರರಿದ್ದರು.

ಜನ ಸ್ಮಾಲ್ ಫೈನಾನ್ಸ್ ಬ್ಯಾಂಕ್
(ಒಂದು ಷೆಡ್ಯೂಲ್ ವಾಣಿಜ್ಯ ಬ್ಯಾಂಕ್)

ನೋಂದಾಯಿತ ಕಛೇರಿ : ದಿ ಫೇರ್‌ವೇ, ನೆಲ ಮತ್ತು ಮೊದಲನೇ ಮಹಡಿ, ಸರ್ವೆ ಸಂ. 10/1, 11/2 ಮತ್ತು 12/2ಬಿ, ದೊಮ್ಮಲೂರು ಪಕ್ಕ, ಕೋರಮಂಗಲ ಒಳ ವರ್ತುಲ ರಸ್ತೆ, ಇಜಿಎಲ್ ಬ್ಯುಸಿನೆಸ್ ಪಾರ್ಕ್ ನಂತರ, ಚಲ್ಲಘಟ್ಟ, ಬೆಂಗಳೂರು–560071.

ಇ–ಹರಾಜು ಸೂಚನೆ

2002ರ ಭದ್ರತಾ ಹಿತಾಸಕ್ತಿ ನಿಯಮಗಳ ಪ್ರಾವಿಸೋ ರೂಲ್ 8(6) ಮತ್ತು 9 ರೊಂದಿಗೆ ಓದಿಕೊಳ್ಳಬೇಕಾದ ಸೆಕ್ಯುರೈಟೆಜೇಷನ್ ಅಂಡ್ ರೀಕನ್ಸ್‌ಟ್ರಕ್ಷನ್ ಆಫ್ ಫೈನಾನ್ಷಿಯಲ್ ಅಸೆಟ್ಸ್ ಅಂಡ್ ಎನ್ ಫೋರ್ಸ್‌ಮೆಂಟ್ ಆಫ್ ಸೆಕ್ಯುರಿಟಿ ಇಂಟರೆಸ್ಟ್ (ಸರ್ಫೇಸಿ ಕಾಯಿದೆ), 2002 ರಡಿ ಆಸ್ತಿಗಳ ಇ-ಹರಾಜು ಮಾರಾಟಕ್ಕಾಗಿ ಸಾರ್ವಜನಿಕ ಸೂಚನೆ

ಆದಾಗ್ಯೂ, ಜನ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್‌ನ ಅಧಿಕೃತ ಅಧಿಕಾರಿಯಾಗಿ ಸರ್ಫೇಸಿ ಕಾಯಿದೆಯ ಕಲಂ 13(4)ರಡಿ ಕೆಳಕಂಡ ಆಸ್ತಿಗಳನ್ನು ಸ್ವಾಧೀನಕ್ಕೆ ಪಡೆದುಕೊಂಡಿರುತ್ತಾರೆ. ಸಾಲಗಾರರಿಗೆ ನಿರ್ದಿಷ್ಟವಾಗಿ ಮತ್ತು ಸಾರ್ವಜನಿಕರಿಗೆ ವಿಸ್ತಾರವಾಗಿ ಮಾಹಿತಿ ನೀಡುವುದೇನೆಂದರೆ ಸಾಲ ಪಡೆಯಲು ಸಾಲಗಾರರು ಅಡಮಾನ ಮಾಡಿರುವ ಆಸ್ತಿಗಳನ್ನು ಬ್ಯಾಂಕಿಗೆ ಬಾಕಿಯಾಗಿರುವ ಸಾಲಗಳ ವಸೂಲಾತಿಗಾಗಿ ''ಎಲ್ಲಿ ಹೇಗಿದೆಯೋ ಹಾಗೆಯೇ'' ಹಾಗೂ ''ಎಲ್ಲಿ ಏನಿದೆಯೋ ಹಾಗೆಯೇ'' ಆಧಾರದಲ್ಲಿ ಆನ್‌ಲೈನ್ ಹರಾಜು (ಇ-ಹರಾಜು) ಮೂಲಕ ಸರ್ಫೇಸಿ ಕಾಯಿದೆಯಂತೆ ಇ-ಹರಾಜು ಮಾರಾಟ ಮಾಡಲಾಗುತ್ತದೆ.

ಕ್ರ. ಸಂ.	ಸಾಲದ ಖಾತಾ ಸಂಖ್ಯೆ	ಮೂಲ ಸಾಲಗಾರ/ ಸಹ-ಸಾಲಗಾರ/ ಜಾಮೀನುದಾರ/ಹೆಸರು	13-2 ನೋಟೀಸ್ ದಿನಾಂಕ	ಸ್ವಾಧೀನತೆಯ ದಿನಾಂಕ	ಪ್ರಸ್ತುತ ಬಾಕಿ ಮೊತ್ತ ದಿನಾಂಕ 29.01.2025 ರಂದು ಇದ್ದಂತೆ	ಆಸ್ತಿಯ ಪರಿಶೀಲನೆಯ ದಿನಾಂಕ ಮತ್ತು ಸಮಯ	ಮೀಸಲು ಬೆಲೆ ಐಎನ್‌ಆರ್	ಅರ್ನೆಸ್ಟ್ ಮನಿ ಡಿಪಾಸಿಟ್ (ಇಎಂಡಿ) ಐಎನ್‌ಆರ್	ಇ-ಹರಾಜಿನ ದಿನಾಂಕ ಮತ್ತು ಸಮಯ	ಬಿಡ್ ಸಲ್ಲಿಸಲು ಸ್ಥಳ ಮತ್ತು ಕೊನೆಯ ದಿನಾಂಕ ಮತ್ತು ಸಮಯ
1	30319430000182	1) ಶ್ರೀ ಎಂ ಜಿ ರವೀಂದ್ರ ಬಾಬು, ಅಲ್ಲದೆ: ಮೆ|| ಸೋನಿ ಡಿಲಕ್ಸ್ ಸಲೂನ್, 2) ಶ್ರೀಮತಿ. ಅನಂತಮ್ಮ ಜಿ, 3) ಶ್ರೀಮತಿ. ಮಮತಾ ಡಿ	11.07.2024	25.11.2024	ರೂ. 14,90,143/- (ಹದಿನಾಲ್ಕು ಲಕ್ಷದ ತೊಂಭತ್ತು ಸಾವಿರದ ನೂರ ನಲವತ್ತಮೂರು ರೂ. ಗಳು ಮಾತ್ರ)	13.02.2025 Time: 09:30 AM to 05:00 PM	ರೂ. 18,49,000/- (ಹದಿನೆಂಟು ಲಕ್ಷದ ನಲವತ್ತೊಂಭತ್ತು ಸಾವಿರ ರೂ. ಗಳು ಮಾತ್ರ)	ರೂ. 1,84,900/- (ಒಂದು ಲಕ್ಷದ ಎಂಭತ್ತನಾಲ್ಕು ಸಾವಿರದ ಒಂಬೈನೂರು ರೂ. ಗಳು ಮಾತ್ರ)	19.02.2025 @ 02:00 PM	18.02.2025, ಸಂಜೆ 05.00 ಗಂಟೆಯ ಒಳಗೆ ಜನ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿ., ಮುಖ್ಯ ಕಛೇರಿ: ದಿ ಫೇರ್‌ವೇ, ನೆಲಮಹಡಿ ಮತ್ತು ಮೊದನೇ ಮಹಡಿ, ಸರ್ವೆ ಸಂ. 10/1, 11/2 ಮತ್ತು 12/2ಬಿ ದೊಮ್ಮಲೂರು ಪಕ್ಕ, ಕೋರಮಂಗಲ ಇನ್ನರ್ ರಿಂಗ್ ರಸ್ತೆ, ಇಜಿಎಲ್ ಬಿಸಿನೆಸ್ ಪಾರ್ಕ್ ನಂತರ, ಚಲ್ಲಘಟ್ಟ, ಬೆಂಗಳೂರು– 560071.

ಭದ್ರತಾ ಆಸ್ತಿಯ ವಿವರಣೆ : ಸಕಲ ಸಮಸ್ತವೂ ಸೇರಿದ ಸ್ಥಿರಾಸ್ತಿ ಕಾರ್ಪೊರೇಷನ್ ವಾರ್ಡ್ ನಂ.31, ಸಿ.ಎಂ.ಸಿ. ವಾರ್ಡ್ ನಂ.25, ಸಿ.ಟಿ.ಎಸ್. ವಾರ್ಡ್ ನಂ.22, ಬ್ಲಾಕ್ ನಂ.33, ಟಿ.ಎಸ್. ನಂ.519/1, ಅಸೆಸ್‌ಮೆಂಟ್ ನಂ.49250/67, ಇಂದಿರಾ ನಗರ, ಕೊಳಗಲ್ಲು ರಸ್ತೆ, ಬಳ್ಳಾರಿ. ಅಳತೆ ಪೂರ್ವ-ಪಶ್ಚಿಮ ಅಳತೆ: 21 ಅಡಿ, ಉತ್ತರ-ದಕ್ಷಿಣ: 30 ಅಡಿ, ಒಟ್ಟಾರೆ ಅಳತೆ 630 ಚ.ಅ. ಇದರಲ್ಲಿ ನಿರ್ಮಿಸಲಾದ ಪ್ರದೇಶ ಜಿ.ಎಫ್. 300, FF: 300 ಅಡಿ, ನೋಂದಣಿ ಮತ್ತು ಉಪ-ನೋಂದಣಿ ಬಳ್ಳಾರಿ ಜಿಲ್ಲೆಯೊಳಗೊಂಡಿದೆ. ಕೆಳಗಿನಂತೆ ಚಕ್ಕುಬಂದಿ: ಪೂರ್ವಕ್ಕೆ: ರಸ್ತೆ, ಪಶ್ಚಿಮಕ್ಕೆ: ಚೆನ್ನಮ್ಮರ ವರ ಆಸ್ತಿ, ಉತ್ತರಕ್ಕೆ: ಗೋವಿಂದವರ ಆಸ್ತಿ, ದಕ್ಷಿಣಕ್ಕೆ: ಸಾವಿತ್ರಮ್ಮನವರ ಆಸ್ತಿ.

ಆಸ್ತಿಗಳನ್ನು ''ಎಲ್ಲಿ ಹೇಗಿದೆಯೋ ಹಾಗೆಯೇ'' ಮತ್ತು ''ಎಲ್ಲಿ ಏನಿದೆಯೋ ಹಾಗೆಯೇ'' ಆಧಾರದಲ್ಲಿ ಮಾರಾಟ ಮಾಡಲಾಗುವುದು. ಇ-ಹರಾಜನ್ನು 'ಆನ್ ಲೈನ್' ಮೂಲಕ ನಡೆಸಲಾಗುತ್ತದೆ. ಹರಾಜನ್ನು ಬ್ಯಾಂಕ್ ಅಂಗೀಕೃತ ಸೇವಾ ಒದಗಿಸುವವರಾದ ಮೆ||-4 ಕ್ಲೋಸರ್ ಮೂಲಕ https://bankauctions.in & www.foreclosureindia.com. ಎಂಬುವ ವೆಬ್‌ಪೋರ್ಟಲ್‌ನಲ್ಲಿ ನಡೆಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮತ್ತು ವಿವರಗಳಿಗಾಗಿ, ನೆರವಿಗಾಗಿ, ಕ್ರಮಗಳ ತಿಳಿದುಕೊಳ್ಳುವುದಕ್ಕಾಗಿ ಮತ್ತು ಇ-ಹರಾಜು ಆನ್‌ಲೈನ್ ತರಬೇತಿ ಪಡೆದುಕೊಳ್ಳುವುದಕ್ಕಾಗಿ ಭಾವಿ ಬಿಡ್‌ದಾರರು ಮೆ||-4 ಕ್ಲೋಸರ್ ಸಂಪರ್ಕ ಶ್ರೀ ಎಂ ಶ್ರೀನಿವಾಸಲು, ಸಂಪರ್ಕ ಸಂ. 8142000809. Email id: info@bankauctions.in / srinivas@bankauctions.in. ಇವರನ್ನು ಸಂಪರ್ಕಿಸುವುದು.

ಷರತ್ತು ಮತ್ತು ನಿಬಂಧನೆಗಳ ಹೆಚ್ಚಿನ ವಿವರಗಳಿಗಾಗಿ ಹಾಗೂ ಇ-ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸುವುದಕ್ಕಾಗಿ ಹಾಗೂ ಆಸ್ತಿ ಸಂಬಂಧಿತ ಯಾವುದೇ ವಿವರಗಳಿಗಾಗಿ ಜನ ಸ್ಮಾಲ್ ಫೈನಾನ್ಸ್ ಬ್ಯಾಂಕ್‌ನ ಅಧೀಕೃತ ಅಧಿಕಾರಿಗಳಾದ ಶ್ರೀ ರಂಜನ್ ನಾಯಕ್, (ಮೊ.ಸಂ. 6362951653), ಶ್ರೀ ಉಮೇಶ್ (ಮೊಬೈಲ್ ಸಂ. 8050149617) ಮತ್ತು ಶ್ರೀಮತಿ ಸಾಯಿದಾ (ಮೊಬೈಲ್ ಸಂ. 7400445147) ಅನ್ನು ಸಂಪರ್ಕಿಸುವುದು. ಅಧಿಕೃತ ಅಧಿಕಾರಿಗಳ ಉತ್ತಮ ತಿಳುವಳಿಕೆ ಮತ್ತು ಮಾಹಿತಿಗೆ ಬಂದಂತೆ ಆಸ್ತಿಗಳ ಮೇಲೆ ಯಾವುದೇ ಋಣಭಾದ್ಯತೆಗಳು ಇಲ್ಲ. ಆದಾಗ್ಯೂ, ಇಚ್ಛೆಯುಳ್ಳ ಬಿಡ್‌ದಾರರು ಬಿಡ್ ಸಲ್ಲಿಸುವ ಮುಂಚೆ ಆಸ್ತಿಯ ಋಣಭಾದ್ಯತೆಗಳು ಹಾಗೂ ಸ್ವಾಮ್ಯ ಮುಂತಾದವುಗಳ ಬಗ್ಗೆ ಅವರದೇ ಸ್ವತಂತ್ರ ವಿಚಾರಣೆಗಳನ್ನು ನಡೆಸಿ ತಿಳಿದುಕೊಳ್ಳಬಹುದಾಗಿದೆ. ಷರತ್ತಿನ ಬಿಡ್‌ಗಳನ್ನು ಒಪ್ಪಿಕೊಳ್ಳುವುದಿಲ್ಲ. ಮೇಲೆ ಹೆಸರಿಸಲಾದ ಸಾಲಗಾರರು/ ಜಾಮೀನುದಾರರು/ ಅಡಮಾನದಾರರುಗಳಿಗೆ ಈ ಮೂಲಕ ಅಧಿಸೂಚಿಸುವುದೇನೆಂದರೆ ಮೇಲೆ ತಿಳಿಸಿದ ಬಾಕಿ ಮೊತ್ತ ಜೊತೆಗೆ ಅಪ್ ಟು ಡೇಟ್ ಬಡ್ಡಿ ಹಾಗೂ ಸಾದಿಲ್ವಾರು ವೆಚ್ಚಗಳನ್ನು ಹರಾಜಿನ ದಿನಾಂಕಕ್ಕೆ ಮುಂಚೆ ಪಾವತಿ ಮಾಡಬೇಕು. ವಿಫಲರಾದಲ್ಲಿ ಮೇಲಿನ ಆಸ್ತಿಯನ್ನು ಮಾರಾಟ ಮಾಡಿ ಸಾಲದ ಬಾಕಿಗಾಗಿ ಹೊಂದಿಸಿಕೊಳ್ಳಲಾಗುವುದು. ಇನ್ನೂ ಬಾಕಿ ಉಳಿದ ಪಕ್ಷದಲ್ಲಿ ಅದನ್ನು ಬಡ್ಡಿ ಮತ್ತು ವೆಚ್ಚಗಳೊಂದಿಗೆ ವಸೂಲು ಮಾಡಿಕೊಳ್ಳಲಾಗುವುದು.

ದಿನಾಂಕ: 31.01.2025, ಸ್ಥಳ: ಬಳ್ಳಾರಿ

ಸಹಿ/- ಅಧಿಕೃತ ಅಧಿಕಾರಿ, ಜನ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್